ಹೊಸದಾಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸದಿರಲು ತೀರ್ಮಾನಿಸಲಾಗಿದೆ.

ಊ) ಈಗ ಸರ್ಕಾರದ ಪತ್ರ ಸಂಖ್ಯೆ : ಇಡಿ 458 ಎಸ್‌ಹೆಚ್‌ಹೆಚ್ 2011 ದಿನಾಂಕ : 12-08-2011 ರಲ್ಲಿ ಕ್ರೋಢೀಕೃತ ಪ್ರಸ್ತಾವನೆಗಳನ್ನು ಕಳುಹಿಸುವಂತೆ ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆಯನ್ನು ಕೋರಲಾಗಿದೆ. ಆಯುಕ್ತರಿಂದ ಪ್ರಸ್ತಾವನೆ ಬರುವುದನ್ನು ನಿರೀಕ್ಷಿಸಲಾಗುತ್ತಿದೆ.

ಶಾಸಕರ ಪ್ರದೇಶಾಭಿವೃದ್ಧಿ ನಿಧಿ

127 : (269)

ಶ್ರೀ ಖಾದರ್ ಯು.ಟಿ. (ಮಂಗಳೂರು)

ಅ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಸರಿಯಾದ ಸಮಯಕ್ಕೆ ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಬಿಡುಗಡೆ ಮಾಡದೇ ಇರುವುದರಿದ ತ್ವರಿತವಾಗಿ ಶಾಸಕರು ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಗುತ್ತಿರುವ ತೊಂದರೆ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ಒದಗಿಸುವುದು) ?

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿ)

ಅ) ಹೌದು.

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿಯನುಸಾರ ಹಿಂದಿನ ಕಂತಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಆಧರಿಸಿ ಮುಂದಿನ ಕಂತುಗಳನ್ನು ಬಿಡುಗಡೆ ಮಾಡಲಾಗುವುದು. ಪ್ರಸ್ತುತ ವರ್ಷದಲ್ಲಿ ಕೊನೆಯ ಕಂತಿನ ಹಣ ಬಿಡುಗಡೆ ಮಾಡುವ ಮುನ್ನ ಎಲ್ಲಾ ಜಿಲ್ಲಾಧಿಕಾರಿಗಳಿಂದ ಲಭ್ಯವಿರುವ ಹಾಗೂ ಬಿಡುಗಡೆಯಾದ ಹಣದ ವಿವರಗಳನ್ನು ಪಡೆದಿದ್ದು, 13 ಜಿಲ್ಲೆಗಳಿಂದ ಮಾತ್ರ ಹಣ ವಿನಿಯೋಗದ ಮಾಹಿತಿ ಸ್ವೀಕರಿಸಲಾಗಿದೆ. ಈ ಜಿಲ್ಲೆಗಳಲ್ಲಿ ಶಾಸಕರ ಅನುದಾನಕ್ಕೆ ಸಂಬಂಧಿಸಿದ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಲಭ್ಯವಿದ್ದ ಹಣದ ಶೇ. 18 ರಿಂದ 44 ರಷ್ಟು ಮಾತ್ರ ಖರ್ಚಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆ. ಆದಾಗ್ಯೂ ದಿ. 07-03-2012 ರಂದು ಕೊನೆಯ ಕಂತನ್ನು 28 ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳಿಗೆ ಕೊನೆಯ ಕಂತನ್ನು 22-3-2012 ರಂದು ಬಿಡುಗಡೆ ಮಾಡಲಾಗಿದೆ.

ಆ) ಅನ್ವಯಿಸುವುದಿಲ್ಲ.

ದ್ವಿತೀಯ ಪಿ.ಯು ಪರೀಕ್ಷೆಯ ಪ್ರವೇಶ ಪತ್ರದಲ್ಲಿ ಜಾತಿ ನಮೂದನೆ

158 : (210)

ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ.ಲೇಔಟ್)

ಅ) 2012ನೇ ಸಾಲಿನ ದ್ವಿತೀಯ ಪಿ.ಯು.ಸಿ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು,

ಆ) ಈ ವಿದ್ಯಾರ್ಥಿ/ವಿದ್ಯಾರ್ಥಿನಿಗಳಿಗೆ ನೀಡಿರುವ ಪ್ರವೇಶ ಪತ್ರದಲ್ಲಿ ಜಾತಿ ನಮೂದಿಸಲಾಗಿದೆಯೇ ?

ಇ) ಹಾಗಿದ್ದಲ್ಲಿ ಕಾರಣಗಳೇನು ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

2012ನೇ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ಹಾಜರಾದ –

ವಿದ್ಯಾರ್ಥಿಗಳ ಸಂಖ್ಯೆ – 3,21,957

ವಿದ್ಯಾರ್ಥಿನಿಯರ ಸಂಖ್ಯೆ – 2,76,458

ಒಟ್ಟು 5,98,415

ಆ) ಪ್ರವೇಶ ಪತ್ರದಲ್ಲಿ ಜಾತಿ ನಮೂದಿಸಿರುವುದಿಲ್ಲ ಆದರೆ, ಜಾತಿ ಸಮೂಹ (Caste group) ಎಂದು ನಮೂದಿಸಲಾಗಿದೆ. ಕೆಲವು ವಿದ್ಯಾರ್ಥಿಗಳು ಪ್ರಥಮ ಪಿ.ಯು.ಸಿ. ಗೆ ದಾಖಲಾತಿ ಮಾಡಿಕೊಳ್ಳುವಾಗ ಓ.ಎಂ.ಆರ್. ಅರ್ಜಿ ನಮೂನೆಯಲ್ಲಿ ವಿದ್ಯಾರ್ಥಿಗಳ ದಾಖಲಾತಿ ವಿವರಗಳನ್ನು ಭರ್ತಿ ಮಾಡಿ ಹಾಗೂ ಶೇಡಿಂಗ್ ಮಾಡಿ, ಕೇಂದ್ರ ಕಚೇರಿಗೆ ತರಿಸಿಕೊಂಡು ಸ್ಕ್ಯಾನಿಂಗ್ ಮಾಡಲಾಗುತ್ತದೆ. ವಿದ್ಯಾರ್ಥಿಗಳು ಓ.ಎಂ.ಆರ್. ನಮೂನೆಗಳಲ್ಲಿ ವಿವರಗಳನ್ನು ಭರ್ತಿ ಮಾಡಿ ಶೇಡಿಂಗ್ ಮಾಡುವಾಗ ಕೆಲವು ವಿವರಗಳನ್ನು ತಪ್ಪಾಗಿ ನಮೂದಿಸಿರುತ್ತಾರೆ ಇಂತಹ ತಪ್ಪುಗಳನ್ನು ತಿದ್ದುಪಡಿ ಮಾಡುವ ಸಲುವಾಗಿ ಕೊನೆಯ ಹಂತವಾಗಿ ವಿದ್ಯಾರ್ಥಿಗಳ ಪ್ರವೇಶ ಪತ್ರಗಳಲ್ಲಿ ಜಾತಿ ಸಮೂಹ (Caste group) ಸೇರಿದಂತೆ ಇತರೆ ವಿವರಗಳನ್ನು ನಮೂದಿಸಲಾಗಿರುತ್ತದೆ. ಈ ಜಾತಿ ಸಮೂಹದಲ್ಲಿನ ತಿದ್ದುಪಡಿಗಳಿಗಾಗಿ ನೂರಾರು ವಿದ್ಯಾರ್ಥಿಗಳು ಪ್ರವೇಶ ಪತ್ರವನ್ನು ಪಡೆದುಕೊಂಡು ನಂತರ ಕೇಂದ್ರ ಕಚೇರಿಗೆ ಕಳುಹಿಸಿ ಕೊಡುತ್ತಿರುತ್ತಾರೆ. ಇಂತಹ ಜಾತಿ ಸಮೂಹ ಅಥವಾ ಯಾವುದೇ ವಿವರಗಳಲ್ಲಿ ಉಳಿದಿರಬಹುದಾದ ತಪ್ಪುಗಳನ್ನು ತಿದ್ದುಪಡಿ